# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(6)ಪಿಆರ್/335/20–21

ಆಯುಕ್ತರವರ ಕಛೇರಿ
ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು,
ಬೆಂಗಳೂರು, ದಿನಾಂಕ: 13-07-2020

## <u>ಸುತ್ತೋಲೆ</u>

**ವಿಷಯ:** **Covid 19 Novel Corona Virus** ನಿಯಂತ್ರಣದ ಸಲುವಾಗಿ ಪಾಲಿಕೆಯ ಅಧಿಕಾರಿ/ನೌಕರರ ವರ್ಗಾವಣೆ ಪ್ರಕ್ರಿಯೆಯನ್ನು ಸ್ಥಗಿತಗೊಳಿಸುವ ಬಗ್ಗೆ.

--------

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕೋವಿಡ್–19 ಸೋಂಕು ಪ್ರಕರಣಗಳು ಉಲ್ಬಣಗೊಳ್ಳುತ್ತಿರುವ ಹಿನ್ನೆಲೆಯಲ್ಲಿ ಈ ಸೋಂಕನ್ನು ಪರಿಣಾಮಕಾರಿಯಾಗಿ ನಿಯಂತ್ರಿಸುವ ನಿಟ್ಟಿನಲ್ಲಿ ಹಾಗೂ ಹೆಚ್ಚಿನ ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಳ್ಳುವ ಸಂಬಂಧ, ಪಾಲಿಕೆಯ ಎಲ್ಲಾ ವೃಂದದ ಅಧಿಕಾರಿ/ನೌಕರರುಗಳು ಈಗಾಗಲೇ ವಿವಿಧ ಕೆಲಸ ಕಾರ್ಯಗಳನ್ನು ನಿರ್ವಹಿಸುತ್ತಿರುತ್ತಾರೆ.

ಇಂತಹ ತುರ್ತು ಸಂದರ್ಭದಲ್ಲಿ ಅಧಿಕಾರಿ/ಸಿಬ್ಬಂದಿಗಳನ್ನು ವರ್ಗಾವಣೆ ಮಾಡಿದ್ದಲ್ಲಿ **Covid 19 Novel Corona Virus** ನಿಯಂತ್ರಣ ಕೆಲಸ ಕಾರ್ಯಗಳಿಗೆ ತೊಂದರೆಗಳಾಗುವ ಸಾಧ್ಯತೆಗಳಿರುವ ಹಿನ್ನೆಲೆಯಲ್ಲಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಎಲ್ಲಾ ವೃಂದದ ಅಧಿಕಾರಿ/ನೌಕರರುಗಳ ವರ್ಗಾವಣೆ ಪ್ರಕ್ರಿಯೆಯನ್ನು ಮುಂದಿನ ಆದೇಶದವರೆಗೆ ಸ್ಥಗಿತಗೊಳಿಸಿ ಆದೇಶಿಸಲಾಗಿದೆ.

ಮಾನ್ಯ ಆಯುಕ್ತರು ಸಂದರ್ಭಾನುಸಾರ ಅಧಿಕಾರಿ/ಸಿಬ್ಬಂದಿಗಳನ್ನು ವರ್ಗಾವಣೆ ಮಾಡುವ ವಿಶೇಷ ಅಧಿಕಾರ ಹೊಂದಿರುತ್ತಾರೆ.

ಆಯುಕ್ತರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು: ಪೂಜ್ಯ ಮಹಾಪೌರರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಮಾನ್ಯ ಉಪ ಮಹಾಪೌರರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಮಾನ್ಯ ಆಯುಕ್ತರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಎಲ್ಲಾ ವಲಯ ಆಯುಕ್ತರು, ಬಿ.ಬಿ.ಎಂ.ಪಿ ರವರುಗಳಿಗೆ ಕಳುಹಿಸಿದೆ.
: ಎಲ್ಲಾ ವಲಯ ಅಪರ / ಜಂಟಿ ಆಯುಕ್ತರುಗಳಿಗೆ ಕಳುಹಿಸಿದೆ.
: ಎಲ್ಲಾ ಇಲಾಖಾ ಮುಖ್ಯಸ್ಥರು/ಬಟವಾಡೆ ಅಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
: ಸಂಬಂಧಪಟ್ಟ ಅಧಿಕಾರಿ/ನೌಕರರಿಗೆ / ಕಛೇರಿ ಪ್ರತಿ.

Scanned by CamScanner